# <u>ಪತ್ರಿಕಾ ಪ್ರಕಟಣೆ</u>

ರಕ್ತದಾನವು ಮತ್ತೊಬ್ಬರ ಜೀವ ಉಳಿಸುವ ಮಹಾದಾನವಾಗಿದ್ದು, ಪ್ರಸ್ತುತ ಕೋವಿಡ್-19 ಸಂದರ್ಭದಲ್ಲಿ ರಕ್ತದಾನದ ಜತೆಗೆ ಪ್ಲಾಸ್ಮಾದಾನ ಕೂಡ ರೋಗಿಯ ಜೀವ ಉಳಿಸಲು ಅತ್ಯಗತ್ಯವಾಗಿದೆ. ಈ ಹಿನ್ನೆಲೆಯಲ್ಲಿ ಪ್ಲಾಸ್ಮಾದಾನದ ಕುರಿತು ಭಾರತೀಯ ರೆಡ್‌ಕ್ರಾಸ್ ಸಂಸ್ಥೆಯು ಸೇರಿದಂತೆ ವಿವಿಧ ಸಂಘ ಸಂಸ್ಥೆಗಳು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು ಎಂದು ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ಡಾ। ಕೆ.ವಿ. ರಾಜೇಂದ್ರ *ಐಎಎಸ್* ಹೇಳಿದ್ದಾರೆ.

ಮಂಗಳೂರಿನ ವೆನ್‌ಲಾಕ್ ಆಸ್ಪತ್ರೆಯಲ್ಲಿ ಪ್ಲಾಸ್ಮಾ ಥೆರಪಿ ಚಿಕಿತ್ಸೆ ಶಿಫ್ರದಲ್ಲಿ ಆರಂಭವಾಗಲಿದ್ದು, ಇದಕ್ಕೆ ಬೇಕಾದ ಯಂತ್ರಗಳು ಬಂದಿವೆ. ಸರಕಾರದ ಅನುಮತಿ ಸಿಕ್ಕಿದ ತಕ್ಷಣ ಪ್ಲಾಸ್ಮಾ ಥೆರಪಿ ಆರಂಭವಾಗಲಿದೆ ಎಂದು ಜಿಲ್ಲಾಧಿಕಾರಿಯವರು ತಿಳಿಸಿದ್ದಾರೆ.

ರಕ್ತದಾನ ಮತ್ತು ಪ್ಲಾಸ್ಮಾದಾನ ಮಾಡಲು ಬಯಸುವವರು ಭಾರತೀಯ ರೆಡ್‌ಕ್ರಾಸ್ ಸಂಸ್ಥೆ, ದಕ್ಷಿಣ ಕನ್ನಡ ಜಿಲ್ಲಾ ಘಟಕದ ಸಂಚಾಲಕರಾದ ಶ್ರೀ ಪ್ರವೀಣ್ ಕುಮಾರ್ (ಮೊ. ಸಂಖ್ಯೆ : **9916262459** ) ಇವರ ದೂರವಾಣಿ ಅಥವಾ ವಾಟ್ಸಾಪ್‌ಗೆ ಸಂಪರ್ಕಿಸಿ ನೋಂದಣಿ ಮಾಡಿಕೊಳ್ಳಬಹುದು. ದಕ್ಷಿಣ ಕನ್ನಡ ಜಿಲ್ಲಾಡಳಿತ ಹಾಗೂ ರೆಡ್‌ಕ್ರಾಸ್ ಸಂಸ್ಥೆ ಜತೆಯಾಗಿ ಪ್ಲಾಸ್ಮಾ ದಾನಿಗಳಿಗೆ ಸೂಕ್ತ ವ್ಯವಸ್ಥೆ ಮಾಡಲಿದೆ ಎಂದು ಅವರು ಪತ್ರಿಕಾ ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.